# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 261 (506) |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.12.2022 |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸ್ವಚ್ಛ ಭಾರತ್ ಯೋಜನೆಗಳಿಗೆ ಸರ್ಕಾರ ಕಳೆದ ಸಾಲಿನಲ್ಲಿ ಒದಗಿಸಿದ ಅನುದಾನವೆಷ್ಟು; ಸಾಧಿಸಿರುವ ಪ್ರಗತಿ ಎಷ್ಟು; ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ; ಉಳಿಕೆ ಹಣ ಖರ್ಚಾಗದಿರಲು ಕಾರಣಗಳೇನು; | ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ 2021-22ನೇ ಸಾಲಿನ ಸಾಲಿನಲ್ಲಿ ರೂ.4160.00ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಯಾವುದೇ ಅನುದಾನವನ್ನು ಬಿಡುಗಡೆಗೊಳಿಸಿರುವುದಿಲ್ಲ. ಆರಂಭಿಕ ಶಿಲ್ಕು ರೂ.68294.83 ಲಕ್ಷಗಳು ಲಭ್ಯವಿದ್ದು, ಈ ಅನುದಾನದಲ್ಲಿ ರೂ: 36055.01ಲಕ್ಷಗಳನ್ನು ವೆಚ್ಚ ಮಾಡಲಾಗಿರುತ್ತದೆ.<br><br>ಕಳೆದ ಸಾಲಿನಲ್ಲಿ ಸಾಧಿಸಿರುವ ಭೌತಿಕ ಪ್ರಗತಿಯ ವಿವರವನ್ನು ಕೆಳಕಂಡ ಕೋಷ್ಟಕದಲ್ಲಿ ನೀಡಲಾಗಿದೆ.<br><br>ಘಟಕಾಂಶಗಳು / ಗುರಿ / ಸಾಧನೆ<br>ವೈಯಕ್ತಿಕ ಗೃಹ ಶೌಚಾಲಯ / 105138 / 95811<br>ಸಮುದಾಯ ಶೌಚಾಲಯ / 200 / 263<br>ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆ / 1850 / 2056 |
| (ಆ) | ಸ್ವಚ್ಛ ಭಾರತ್ ಸೇರಿದಂತೆ ಹಲವು ಯೋಜನೆಗಳ ಅನುಷ್ಠಾನದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಹಿಂದೆ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ 2021-22ನೇ ಸಾಲಿನಲ್ಲಿ ನಿಗದಿ ಪಡಿಸಿದ ಭೌತಿಕ ಗುರಿಗೆ ಅನುಗುಣವಾಗಿ ಪ್ರಗತಿಯನ್ನು ಸಾಧಿಸಲಾಗಿರುತ್ತದೆ. ಪ್ರಸ್ತುತ ODF Plus Aspiring ಗ್ರಾಮಗಳ ಘೋಷಣೆಯಲ್ಲಿ ರಾಷ್ಟ್ರದಲ್ಲಿ 2ನೇ ಸ್ಥಾನದಲ್ಲಿದೆ. ಪ್ರಸಕ್ತ ಸಾಲಿನಲ್ಲಿ ರಾಷ್ಟ್ರಮಟ್ಟದಲ್ಲಿ ನಡೆದ Sujalam 2.0 ಹಾಗೂ ಸ್ವಚ್ಛತಾ ಹಿ ಸೇವಾ ಆಂದೋಲನಗಳಲ್ಲಿ ಕರ್ನಾಟಕ ರಾಜ್ಯವು ಪ್ರಥಮ ಸ್ಥಾನ ಪಡೆದು ಪ್ರಶಸ್ತಿ ಪತ್ರಗಳನ್ನು ಸ್ವೀಕರಿಸಲಾಗಿರುತ್ತದೆ. |
| (ಇ) | ಬಂದಿದ್ದಲ್ಲಿ, ಆಯಾ ವರ್ಷದ ಅನುದಾನವನ್ನು ಆಯಾ ವರ್ಷವೇ ಬಳಕೆ ಮಾಡಿಕೊಳ್ಳಲಾಗುತ್ತಿದೆಯೇ; | ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಬಿಡುಗಡೆಗೊಳಿಸಲಾಗುತ್ತಿರುವ ಅನುದಾನವನ್ನು ಸಕಾಲದಲ್ಲಿ ವೆಚ್ಚ ಮಾಡಲು ಕ್ರಮವಹಿಸಲಾಗುತ್ತಿದೆ. |

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ